ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 14–12–2014

ಪತ್ರಿಕಾ ಪ್ರಕಟಣೆ

## ಸಮಾಜದ ಕಟ್ಟಕಡೆಯವರಿಗೆ ನ್ಯಾಯ ಒದಗಿಸಲು ನ್ಯಾಯಾಧಿಕಾರಿಗಳಿಗೆ ಕರೆ

ಬೆಂಗಳೂರು, ಡಿಸೆಂಬರ್ 14 : ಸಮಾಜದ ಕಟ್ಟಕಡೆಯವರ ಕಣ್ಣೀರು ಒರೆಸುವ ಕೆಲಸವನ್ನು ನ್ಯಾಯಾಂಗ ವ್ಯವಸ್ಥೆ ಮಾಡಲಿ , ಇದಕ್ಕೆ ಅಗತ್ಯವಾದ ಎಲ್ಲ ಸೌಲಭ್ಯ ಸಹಕಾರವನ್ನು ನೀಡಲು ನಮ್ಮ ಸರ್ಕಾರ ಸಂಪೂರ್ಣ ಬದ್ಧವಾಗಿದೆ ಎಂದು ತಿಳಿಸಿರುವ ಮಾನ್ಯ ಮುಖ್ಯಮಂತ್ರಿಗಳ ಮಾತುಗಳನ್ನು ನಾನು ತಮ್ಮ ಮುಂದಿಡಲು ಅಪೇಕ್ಷಿಸುತ್ತೇನೆ. ನ್ಯಾಯಾಂಗ ವ್ಯವಸ್ಥೆಯಲ್ಲಿ ಗುಣಾತ್ಮಕ, ಸ್ಪಂದನಾತ್ಮಕ ಹಾಗೂ ತ್ವರಿತವಾದ ತೀರ್ಮಾನಗಳನ್ನು ತೆಗೆದುಕೊಳ್ಳುವ ಕಾರ್ಯವಾಗಬೇಕಾಗಿದೆ, ಡಾ॥ ಬಿ.ಆರ್. ಅಂಬೇಡ್ಕರ್ ಅವರ ಆಶಯದಂತೆ ಸಾಮಾಜಿಕ ನ್ಯಾಯ ಪ್ರತಿಯೊಬ್ಬರಿಗೂ ದೊರೆಯಬೇಕಾಗಿದೆ ಎಂದು ಲೋಕೋಪಯೋಗಿ, ಬಂದರು ಹಾಗೂ ಒಳನಾಡು ಜಲಸಾರಿಗೆ ಖಾತೆ ಸಚಿವರಾದ ಡಾ॥ ಹೆಚ್. ಸಿ.ಮಹಾದೇವಪ್ಪ ಅವರು ಅಭಿಪ್ರಾಯ ಪಟ್ಟರು. ಅವರು ಇಂದು (ದಿನಾಂಕ: 14–12–2014) ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಏರ್ಪಡಿಸಲಾಗಿದ್ದ ಎರಡು ದಿನಗಳ ಕರ್ನಾಟಕ ರಾಜ್ಯ ನ್ಯಾಯಾಂಗ ಅಧಿಕಾರಿಗಳ ಸಂಘದ ದ್ವೈವಾರ್ಷಿಕ 17 ನೇ ರಾಜ್ಯಮಟ್ಟದ ಸಮ್ಮೇಳನದ ಸಮಾರೋಪ ಸಮಾರಂಭವನ್ನು ಉದ್ದೇಶಿಸಿ ಮಾತನಾಡುತ್ತಿದ್ದರು.

ಕಳೆದ 10–20 ವರ್ಷಗಳಿಗೆ ಹೋಲಿಸಿದ್ದಲ್ಲಿ ಇಂದು ನ್ಯಾಯಾಂಗ ವ್ಯವಸ್ಥೆಯಲ್ಲಿ ಗಣನೀಯವಾದ ಬದಲಾವಣೆಯಾಗಿದೆ. ಹೆಚ್ಚಿನ ಮೂಲಭೂತ ಸೌಲಭ್ಯಗಳು, ಆಧುನಿಕ ತಂತ್ರಜ್ಞಾನದ ವ್ಯವಸ್ಥೆಯನ್ನು ನಾವು ಈಗ ಹೊಂದಿದ್ದೇವೆ. ಆದಾಗ್ಯೂ ನಮ್ಮ ನ್ಯಾಯಾಂಗದ ತೀರ್ಪುಗಳಲ್ಲಿ ಗುಣಾತ್ಮಕತೆಯ ಕೊರತೆಯನ್ನು ನಾವು ಗಮನಿಸಿದ್ದೇವೆ. ಹೀಗಾದಲ್ಲಿ ಜನ ಸಾಮಾನ್ಯರು ನ್ಯಾಯಾಂಗ ವ್ಯವಸ್ಥೆಯಲ್ಲಿ ನಂಬಿಕೆಯನ್ನು ಕಳೆದುಕೊಳ್ಳುವ ಅಪಾಯವಿದ್ದು ನಾವು ಈ ದಿಸೆಯಲ್ಲಿ ಎಚ್ಚೆತ್ತುಕೊಳ್ಳಬೇಕಾಗಿದೆ. ನ್ಯಾಯಾಂಗದ ಅಧಿಕಾರಿಗಳು ನ್ಯಾಯಾಂಗದ ಒಳಹೊರಗೆ ಘನತೆ, ಗೌರವ ಹಾಗೂ ನಂಬಿಕೆಯನ್ನು ಉಳಿಸಿಕೊಳ್ಳುವ ರೀತಿಯಲ್ಲಿ ಕಾರ್ಯನಿರ್ವಹಿಸಬೇಕಾಗಿದೆ ಎಂದು ಸಭೆಯಲ್ಲಿದ್ದ ನ್ಯಾಯಾಂಗ ಅಧಿಕಾರಿಗಳಿಗೆ ಉಚ್ಛನ್ಯಾಯಾಲಯದ ನ್ಯಾಯಮೂರ್ತಿಗಳಾದ ಶ್ರೀ ಕೆ.ಎಲ್.ಮಂಜುನಾಥ್ ಅವರು ಕರೆ ನೀಡಿದರು.

ಕಲ್ಕತ್ತಾ ಉಚ್ಛನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳಾದ ಶ್ರೀಮತಿ ಮಂಜುಳಾ ಚೆಲ್ಲೂರ್ ಅವರು ಈ ಸಂದರ್ಭದಲ್ಲಿ ಮಾತನಾಡಿ ಪ್ರತಿಯೊಬ್ಬ ನ್ಯಾಯಾಧಿಕಾರಿಗಳು ಭೌತಿಕವಾಗಿ ಹಾಗೂ ಮಾನಸಿಕವಾಗಿ ಸಶಕ್ತರಾಗಿರಬೇಕು ಹಾಗೂ ಗುಣಾತ್ಮಕವಾದ ತೀರ್ಪನ್ನು ನೀಡುವ ಮೂಲಕ

ಸಮಾಜದ ಕಟ್ಟಕಡೆಯವರಿಗೆ ನ್ಯಾಯಾಂಗ ವ್ಯವಸ್ಥೆಯಲ್ಲಿ ನಂಬಿಕೆ ಬರುವಂತೆ ಕಾರ್ಯನಿರ್ವಹಿಸಬೇಕೆಂದು ಕರೆ ನೀಡಿದರು.

ಭಾರತದ ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರಾದ ಶ್ರೀ ವಿ. ಗೋಪಾಲಗೌಡ ಅವರು ಮಾತನಾಡಿ ಈ ಎರಡು ದಿನಗಳ ಸಮ್ಮೇಳನ ಇಡೀ ನ್ಯಾಯಾಂಗ ವ್ಯವಸ್ಥೆಯ ಕಣ್ಣು ತೆರೆಸುವಂತಿದೆ . ಸಮ್ಮೇಳನದಲ್ಲಿ ಚರ್ಚೆಗೆ ಆಯ್ಕೆ ಮಾಡಿಕೊಳ್ಳಲಾಗಿದ್ದ ವಿಷಯಗಳು ಹಾಗೂ ಚರ್ಚೆ ನಡೆದ ರೀತಿ ಅತ್ಯುತ್ತಮವಾಗಿದ್ದು, ಇದೊಂದು ಇಡೀ ದೇಶಕ್ಕೆ ಮಾದರಿ ಸಮ್ಮೇಳನವಾಗಿದ್ದು ನ್ಯಾಯಾಂಗ ವ್ಯವಸ್ಥೆಯ ಕಣ್ಣು ತೆರೆಸುವಂತಿತ್ತು ಎಂದರು. ಡಾ|| ಬಿ.ಆರ್. ಅಂಬೇಡ್ಕರ್‌ರವರ ಸಾಮಾಜಿಕ ನ್ಯಾಯದ ಕನಸು ನನಸಾಗಬೇಕಾದಲ್ಲಿ ನ್ಯಾಯಾಧೀಶರ ಕರ್ತವ್ಯ ಅತ್ಯಂತ ಪ್ರಮುಖವಾದುದಾಗಿದೆ. ಸಮಾಜದಲ್ಲಿ ಆರೋಗ್ಯ, ಅಕ್ಷರ, ಸಾಮಾಜಿಕ ನ್ಯಾಯ ಹಾಗೂ ಇತರೆ ಸಮಸ್ಯೆಗಳಿಂದ ಬಳಲುವ ಜನಸಾಮಾನ್ಯರ ದನಿಯಾಗಿ ನ್ಯಾಯಾಂಗ ವ್ಯವಸ್ಥೆ ಕಾರ್ಯನಿರ್ವಹಿಸಬೇಕಾಗಿದೆ ಎಂದು ಅವರು ತಿಳಿಸಿದರು.

ಆಗಾಧ ಸಂಖ್ಯೆಯಲ್ಲಿ ತೀರ್ಮಾನವಾಗದೇ ಉಳಿದಿರುವ ಮೊಕದ್ದಮೆಗಳಿಗೆ ನ್ಯಾಯಾಧೀಶರನ್ನು ಹೊಣೆ ಮಾಡಬಾರದು, ಹೆಚ್ಚುತ್ತಿರುವ ಜನಸಂಖ್ಯೆಗೆ ಅನುಗುಣವಾಗಿ ಅಗತ್ಯ ಮೂಲಭೂತ ಸೌಲಭ್ಯಗಳು, ಹೆಚ್ಚಿನ ಸಂಖ್ಯೆಯ ಸಿಬ್ಬಂದಿ ಹಾಗೂ ಇತರೆ ಅಗತ್ಯ ಸೌಲಭ್ಯಗಳನ್ನು ನೀಡಿದ್ದಲ್ಲಿ ಈ ಸಮಸ್ಯೆ ಪರಿಹಾರವಾಗಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಕರ್ನಾಟಕ ರಾಜ್ಯ ನ್ಯಾಯಾಂಗ ಅಧಿಕಾರಿಗಳ ಸಂಘದ ಜನರಲ್ ಸೆಕ್ರೆಟರಿಗಳಾದ ಶ್ರೀ ಎನ್.ಜಿ.ದಿನೇಶ್ ಅವರು ವಂದನಾರ್ಪಣೆಯನ್ನು ಸಲ್ಲಿಸಿದರು.

*****

## ರೈತರಿಗೆ ರಾಗಿ ಕಟಾವು ಯಂತ್ರ ಖರೀದಿಗೆ ಸರ್ಕಾರದ ಸಹಾಯಧನ

ಬೆಂಗಳೂರು, ಡಿಸೆಂಬರ್ 14 : ಕೃಷಿ ಕ್ಷೇತ್ರದಲ್ಲಿ ಇಂದು ಕೂಲಿ ಕಾರ್ಮಿಕರ ಅಭಾವದಿಂದಾಗಿ ಇಳುವರಿ ಕಡಿಮೆಯಾಗುತ್ತಿದೆ. ಈ ಸಮಸ್ಯೆಯನ್ನು ಪರಿಹರಿಸುವ ಉದ್ದೇಶದಿಂದ ಸರ್ಕಾರವು ರಾಗಿ ಕಟಾವು ಮಾಡುವ ಪೆಟ್ರೋಲ್ ಯಂತ್ರವನ್ನು ಖರೀದಿಸಲು ಸಹಾಯಧನ ನೀಡುವ ಮೂಲಕ ರೈತರಿಗೆ ಪ್ರೋತ್ಸಾಹಿಸಲು ಸರ್ಕಾರ ಉದ್ದೇಶಿಸಿದೆ ಎಂದು ಕೃಷಿ ಸಚಿವರಾದ ಶ್ರೀ ಕೃಷ್ಣಬೈರೇಗೌಡ ಅವರು ತಿಳಿಸಿದರು. ಅವರು ಇಂದು ಅಖಿಲ ಭಾರತ ಕಿರುಧಾನ್ಯ ಅಭಿವೃದ್ಧಿ ಯೋಜನೆ, ಕೃಷಿ ವಿಶ್ವವಿದ್ಯಾನಿಲಯ ಬೆಂಗಳೂರು ಹಾಗೂ ಕೃಷಿ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ ಯಾಂತ್ರಿಕ ರಾಗಿ ಕಟಾವಿನ ಪ್ರಾತ್ಯಕ್ಷಿಕೆಯಲ್ಲಿ ರೈತರನ್ನು ಉದ್ದೇಶಿಸಿ ಮಾತನಾಡುತ್ತಿದ್ದರು.

ಈಗಾಗಲೇ ಪ್ರಸಕ್ತ ಸಾಲಿನಲ್ಲಿ 186 ಕ್ಷೇತ್ರಗಳಲ್ಲಿ 70 ಕೋಟಿ ರೂ. ವೆಚ್ಚದಲ್ಲಿ ಡೀಸೆಲ್ ಕಟಾವು ಯಂತ್ರಗಳ ಖರೀದಿಗೆ ಸಹಾಯ ಧನ ನೀಡಲು ಸರ್ಕಾರ ಕ್ರಮ ಕೈಗೊಂಡಿದೆ. ಒಂದು ಎಕರೆ ರಾಗಿ ಕಟಾವಿಗೆ ಈ ಯಂತ್ರವನ್ನು ಬಳಸಿದ್ದಲ್ಲಿ ಕೇವಲ 600 ರಿಂದ 700 ರೂ.ಗಳ ವೆಚ್ಚ ತಗಲುತ್ತದೆ. ಕೂಲಿ ಕಾರ್ಮಿಕರನ್ನು ಬಳಸಿ ಇದೇ ಕೆಲಸ ನಿರ್ವಹಿಸಲು ಅಂದಾಜು 5000 ರೂ.ಗಳ ವೆಚ್ಚವಾಗುವುದರಿಂದ ಈ ಯಂತ್ರ ಖರೀದಿಸಿದ್ದಲ್ಲಿ ರೈತರಿಗೆ ಗಣನೀಯ ಉಳಿತಾಯವಾಗಲಿದೆ.

ಕೇಂದ್ರ ಸರ್ಕಾರ ರಾಗಿ ಹಾಗೂ ಜೋಳ ಪ್ರತಿ ಕ್ವಿಂಟಾಲ್ ಖರೀದಿಗೆ ಘೋಷಿಸಿರುವ ರೂ.1,500ಗಳ ಬೆಂಬಲ ಬೆಲೆ ಜೊತೆಗೆ ರಾಜ್ಯ ಸರ್ಕಾರ ರೂ. 500 ಗಳನ್ನು ಸೇರಿಸಿ ಒಟ್ಟು ರೂ.2000ಗಳನ್ನು ನೀಡಲು ಸರ್ಕಾರ ಕ್ರಮ ಕೈಗೊಂಡಿದೆ.

ಈ ಪ್ರಾತ್ಯಕ್ಷಿಕೆಯಲ್ಲಿ ಕೃಷಿ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಡಾ||ಡಿ.ಪಿ.ಕುಮಾರ್ ಹಾಗೂ ಇತರೆ ಗಣ್ಯರು ಪಾಲ್ಗೊಂಡಿದ್ದರು.

*****